(13)

ಸಂಖ್ಯೆ:ಆಇ 736 ವೆಚ್ಚ-12/18

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ:23.07.2018

**ಅಧಿಸೂಚನೆ**

ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನ ಸಂಸ್ಥೆ (ಎಂಪ್ರಿ) ಯ ಪ್ರಯೋಗ ಶಾಲೆಯಲ್ಲಿ ನೀರಿನ ಗುಣಮಟ್ಟ ವಿಶ್ಲೇಷಣೆ ಮತ್ತು ಸೂಕ್ಷ್ಮ ಜೀವಾಣು ಪರೀಕ್ಷೆ ಹಾಗೂ ಹವಾಮಾನಕ್ಕೆ ಸಂಬಂಧಿಸಿದ ಯಾವುದೇ ಪರೀಕ್ಷೆ ಕಾರ್ಯ ಕುರಿತಂತೆ ಭಾರತ ಸರ್ಕಾರದ ಅಧೀನದ ಕೇಂದ್ರೀಯ ಮಾಲಿನ್ಯ ನಿಯಂತ್ರಣ ಮಂಡಳಿಯು ವಿಧಿಸುವ ದರಗಳಲ್ಲಿ, ಗರಿಷ್ಟ ರೂ.5.00 ಲಕ್ಷದವರೆಗಿನ ಸೇವೆಯನ್ನು ಸರ್ಕಾರದ ಇಲಾಖೆಗಳು, ಮಂಡಳಿಗಳು, ಸರ್ಕಾರದ ಅಧೀನ ಸಂಸ್ಥೆಗಳು ನೇರವಾಗಿ ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಪರಿಸರ ಮತ್ತು ಜೀವಿಪರಿಸ್ಥಿತಿ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ.

ಉತ್ತಮ ಗುಣಮಟ್ಟದ ಸೇವೆಯನ್ನು ಸಮಂಜಸ ದರದಲ್ಲಿ ಸಂಗ್ರಹಿಸುವುದನ್ನು ಪರಿಸರ ಮತ್ತು ಜೀವಿಪರಿಸ್ಥಿತಿ ಇಲಾಖೆಯು ದೃಢಪಡಿಸಿಕೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ.ಎನ್. ಕೃಷ್ಣಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ)
23/7

ಇವರಿಗೆ:

ಜಂಟಿ ನಿರ್ದೇಶಕರು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಆರ್.ವಿ.ಕಾಲೇಜು ಅಂಚೆ, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-59, ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಹಾಗೂ 25 ಮುದ್ರಿತ ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.

ಪ್ರತಿ:

1) ಮಹಾಲೇಖಪಾಲರು (ಲೆಕ್ಕ ಮತ್ತು ಪರಿಶೋಧನೆ), ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು, ಪರಿಸರ ಮತ್ತು ಜೀವಿಪರಿಸ್ಥಿತಿ ಇಲಾಖೆ.
3) ನಿರ್ದೇಶಕರು, ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು - 10 ಪ್ರತಿಗಳು.
4) ಹೆಚ್ಚುವರಿ ಪ್ರತಿ.